ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರು(ಆಡಳಿತ) ರವರ ಕಾರ್ಯಾಲಯ ಕಲಬುರಗಿ

ಸಂಖ್ಯೆ:ಸಿ2(4)/ಆಡಳಿತ/ಗ್ರೂಪ-ಡಿ/ಬಡ್ತಿ/113/2020-21 ದಿನಾಂಕ:22-10-2021

## ಅಧಿಸೂಚನೆ

ವಿಷಯ:-ಕಲಬುರಗಿ ಜಿಲ್ಲೆಯ ವ್ಯಾಪ್ತಿಯ ಗ್ರೂಪ-ಡಿ ವೃಂದದ ಸೇವಕ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ದಿನಾಂಕ:01-01-2021 ರಲ್ಲಿದ್ದಂತೆ ಸೇವಾ ಹಿರಿತನದ ಆಧಾರದ ಮೇರೆಗೆ ವಿಜ್ಞಾನ ಸಹಾಯಕರ ಹುದ್ದೆಗೆ ಬಡ್ತಿ ನೀಡಲು ತಯ್ಯಾರಿಸಿದ ತಾತ್ಕಾಲಿಕ ಅರ್ಹತಾ ಪಟ್ಟಿ ಪ್ರಕಟಿಸುವ ಬಗ್ಗೆ.

ಉಲ್ಲೇಖ:-1)ಕರ್ನಾಟಕ ಸರ್ಕಾರಿ ನೌಕರರ(ಜೇಷ್ಠತಾ)ನಿಯಮಗಳು 1957 ನಿಯಮ(5) ರಂತೆ.

2)ಸರ್ಕಾರಿ ಪತ್ರ ಸಂಖ್ಯೆ:ಇಡಿ 202 ಎಸ್ಎಲ್‌ಬಿ 2014 ದಿನಾಂಕ:20-05-2014.

3)ಸರ್ಕಾರಿ ಪತ್ರ ಸಂಖ್ಯೆ:ಇಡಿ 152 ಎಲ್‌ಬಿಪಿ 2014 ದಿನಾಂಕ:20-05-2014.

4)ಸರ್ಕಾರದ ಪತ್ರ ಸಂಖ್ಯೆ:ಡಿ.ಪಿ.ಎ.ಆರ್186ಎಸ್.ಆರ್.ಎಸ್2018 ಬೆಂಗಳೂರು ದಿ:15-05-2019.

5)ಈ ಕಛೇರಿ ಅಧಿಸೂಚನೆ ದಿನಾಂಕ:15-02-2021, 26-04-2021.

- * * * * * -

ಕಲಬುರಗಿ ಜಿಲ್ಲೆಯ ವ್ಯಾಪ್ತಿಯ ಗ್ರೂಪ-ಡಿ ವೃಂದದ ಸೇವಕ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ದಿನಾಂಕ:01-01-2021 ರಲ್ಲಿದ್ದಂತೆ ಸೇವಾ ಹಿರಿತನದ ಆಧಾರದ ಮೇರೆಗೆ ವಿಜ್ಞಾನ ಸಹಾಯಕರ ಹುದ್ದೆಗೆ ಬಡ್ತಿ ನೀಡುವ ಸಂಬಂಧ 1:2 ರಂತೆ ತಾತ್ಕಾಲಿಕ ಅರ್ಹತಾ ಪಟ್ಟಿಯನ್ನು ತಯ್ಯಾರಿಸಲಾಗಿದೆ. ಸದರಿ ಪಟ್ಟಿಯನ್ನು ಈ ಕಾರ್ಯಾಲಯದ ವೆಬ್‌ಸೈಟ್ (www.ddpikalaburgi.in)ದಲ್ಲಿ ಗಮನಿಸಬಹುದು. ಸದರಿ ಪಟ್ಟಿಗೆ ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ:27-10-2021ರ ವರೆಗೆ ನೇರವಾಗಿ ಈ ಕಛೇರಿಗೆ ಸಲ್ಲಿಸತಕ್ಕದ್ದು. ನಂತರ ಸಲ್ಲಿಸಿದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಪ್ರಯುಕ್ತ ಗ್ರೂಪ-ಡಿ ವೃಂದದ ಸೇವಕ ಹುದ್ದೆಯಿಂದ ವಿಜ್ಞಾನ ಸಹಾಯಕರ ಹುದ್ದೆಗೆ ಬಡ್ತಿ ನೀಡುವ 1:2 ರ ತಾತ್ಕಾಲಿಕ ಅರ್ಹತಾ ಪಟ್ಟಿಯಲ್ಲಿರುವ ನೌಕರರು 7 ದಿನಗಳ ಒಳಗಾಗಿ 5 ವರ್ಷಗಳ ಗೌಪ್ಯ ವರದಿ, ಎಸ್.ಎಸ್.ಎಲ್.ಸಿ ಮೂಲ ಅಂಕಪಟ್ಟಿ ಹಾಗೂ ಮೂಲ ಸೇವಾ ಪುಸ್ತಕವನ್ನು ದಿನಾಂಕ:27-10-2021ರ ಒಳಗಾಗಿ ಈ ಕಛೇರಿಗೆ ಸಲ್ಲಿಸತಕ್ಕದ್ದು.

ಉಪ ನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ
ಕಲಬುರಗಿ

ಗೆ,

1) ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.

2) ಈ ಕಛೇರಿಯ ಇ-ಗೌರ್ನರ್ಸಕ್ಕೆ ಕೊಡುತ್ತಾ ಈ ಕಾರ್ಯಾಲಯದಲ್ಲಿ ವೆಬ್‌ಸೈಟ್‌ದಲ್ಲಿ ಪ್ರಕಟಿಸಲು ತಿಳಿಸಿದೆ.

ಪ್ರತಿಯನ್ನು:-

1) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆಯ ಸಚಿವಾಲಯ ಬಹುಮಹಡಿಗಳ ಕಟ್ಟಡ ಬೆಂಗಳೂರು ಇವರಿಗೆ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
2) ಮಾನ್ಯ ಆಯುಕ್ತರು ಬೆಂಗಳೂರು ಹಾಗೂ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
3) ಮಾನ್ಯ ನಿರ್ದೇಶಕರು ಅಪರ ಆಯುಕ್ತರ ಕಛೇರಿ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
4) ಮಾನ್ಯ ಸಹ ನಿರ್ದೇಶಕರು(ಆಡಳಿತ) ಅಪರ ಆಯುಕ್ತರ ಕಛೇರಿ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.